ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಚುನಾವಣೆ - ಇತರೆ ರಾಜ್ಯ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE 7-12-19

# ಜಾರ್ಖಂಡ್‌ನಲ್ಲಿ ಇಂದು ಮತದಾನ

ರಾಂಚಿ: ವಿಧಾನಸಭೆ ಚುನಾವಣೆಯ ಎರಡನೇ ಹಂತದಲ್ಲಿ 20 ಕ್ಷೇತ್ರಗಳಿಗೆ ಶನಿವಾರ ನಡೆಯಲಿರುವ ಮತದಾನಕ್ಕೆ ನಕ್ಸಲ್ ಪೀಡಿತ ಜಾರ್ಖಂಡ್ ಸಜ್ಜುಗೊಂಡಿದೆ. ಸೂಕ್ಷ್ಮ ಪ್ರದೇಶ ಎಂದು ಗುರುತಿಸಲಾಗಿರುವ ಪೂರ್ವ ಸಿಂಗ್‌ಭೂಮ್ ಜಿಲ್ಲೆಯ ಆರು ಕ್ಷೇತ್ರಗಳಲ್ಲಿಯೂ ಶನಿವಾರವೇ ಮತದಾನ ನಡೆಯಲಿದ್ದು, ಸೂಕ್ತ ಭದ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ಸಾಮಾಜಿಕ ಜಾಲತಾಣಗಳಲ್ಲಿ ಉದ್ರೇಕಕಾರಿ ಸುದ್ದಿಗಳನ್ನು ಹರಡುವುದನ್ನು ತಡೆಯುವುದಕ್ಕಾಗಿ ನಿಗಾ ಸಮಿತಿಗಳನ್ನು ರಚಿಸಲಾಗಿದೆ.

ಕಾನೂನು ಮತ್ತು ಸುವ್ಯವಸ್ಥೆಗೆ ಭಂಗ ತರಬಲ್ಲಂತಹ 2300 ಜನರನ್ನು ಗುರುತಿಸಿದ್ದು ಅವರಿಗೆ ನೋಟಿಸ್ ನೀಡಲಾಗಿದೆ. ಜಂಶೆಡ್‌ಪುರ ಪೂರ್ವ ಮತ್ತು ಪಶ್ಚಿಮ ಕ್ಷೇತ್ರಗಳಲ್ಲಿ ಸಿಆರ್‌ಪಿಎಫ್ ಜೊತೆಗೆ ರೈಲ್ವೆ ಸುರಕ್ಷತಾ ದಳವನ್ನು ಕೂಡ ನಿಯೋಜಿಸಲಾಗಿದೆ. ವ್ಯೂಹಾತ್ಮಕ ಪ್ರದೇಶಗಳಲ್ಲಿ ಗಡಿರಕ್ಷಣಾ ಪಡೆ ಯೋಧರನ್ನು ನೇಮಿಸಲಾಗಿದೆ ಎಂದು ಪೂರ್ವ ಸಿಂಗ್‌ಭೂಮ್ ಜಿಲ್ಲೆಯ ಹಿರಿಯ ಜಿಲ್ಲಾ ವರಿಷ್ಠಾಧಿಕಾರಿ ಅನೂಪ್ ಬಿರ್ತೇ ತಿಳಿಸಿದ್ದಾರೆ.